**ಉಡುಪಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ**

**ಅಧಿಸೂಚನೆ ಸಂಖ್ಯೆಃ ADMN/ 02 /2017**

**ದಿನಾಂಕಃ 09-03-2017**

ವಿಷಯ ಃ ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಜವಾನ ಹುದ್ದೆಗಳ ನೇಮಕಾತಿ ಬಗ್ಗೆ.

ಓದಲಾಗಿದೆಃ
1. ಸರ್ಕಾರದ ದಿನಾಂಕ **28-03-2016**ರ ಆದೇಶ ಸಂಖ್ಯೆಃ ಲಾಃ137 ಎಲ್‌ಸಿಇ2014
2. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: **LCA- II/128/2012, ದಿನಾಂಕ13-02-2017.**

******

ಉಲ್ಲೇಖ 1ರ ಸರ್ಕಾರಿ ಆದೇಶದಂತೆ ಉಡುಪಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಘಟಕದಲ್ಲಿ ಹೊಸದಾಗಿ ಸೃಜನೆಗೊಂಡಿರುವ ನ್ಯಾಯಾಲಯಗಳಿಗೆ ಮಂಜೂರಾಗಿರುವ ಶೀಘ್ರಲಿಪಿಗಾರ, ಬೆರಳಚ್ಚುಗಾರ ಮತ್ತು ಜವಾನ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆ ಮತ್ತು ಇತರೇ ಮಾಹಿತಿಯನ್ನು ***ecourts.gov.in/ udupi*** ಇಲ್ಲಿಂದ ಡೌನಲೋಡ್ **(Download)** ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಃ **22-04-2017**, ಸಂಜೆ **5-00** ಘಂಟೆ.

ಅರ್ಜಿ ಸಲ್ಲಿಸಬೇಕಾದ ವಿಳಾಸಃ- ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಉಡುಪಿ ಜಿಲ್ಲೆ, ಉಡುಪಿ.

ಭಾಗಃ 1

## 1. ಶೀಘ್ರಲಿಪಿಗಾರಃ (Stenographers)

ಹುದ್ದೆಗಳ ಸಂಖ್ಯೆಃ 4.

ವೇತನ ಶ್ರೇಣಿಃ- 14550-350-15600-400-17200-450-19000-500-21000-600-24600-700-26700 ಹಾಗೂ ಇತರ ಭತ್ಯೆಗಳೊಂದಿಗೆ.

ಹುದ್ದೆಗಳ ವರ್ಗೀಕರಣಃ-

| ಮೀಸಲಾತಿ | ಕ.ಮಾ. | ಮಹಿಳೆ | ಒಟ್ಟು |
|---|---|---|---|
| ಸಾಮಾನ್ಯ | 1 | 1 | 2 |
| ಪ್ರವರ್ಗ 2ಎ | - | 1 | 1 |
| ಪ್ರವರ್ಗ –1 | - | 1 | 1 |
| **ಒಟ್ಟು** | **1** | **3** | **4** |

**ಶೈಕ್ಷಣಿಕ ವಿದ್ಯಾರ್ಹತೆಃ-**

(1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

(2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಹಿರಿಯ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರಬೇಕು.

ಅಥವಾ

(3) ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟೆರಿಯಲ್ ಪ್ರ್ಯಾಕ್ಟೀಸ್ ಪಠ್ಯಕ್ರಮದ ಡಿಪ್ಲೊಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಮತ್ತು ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯಗಳನ್ನಾಗಿ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.

**ಆಯ್ಕೆ ವಿಧಾನಃ-**

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಪ್ರತಿ ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## 2. ಬೆರಳಚ್ಚುಗಾರಃ (Typist):

ಹುದ್ದೆಗಳ ಸಂಖ್ಯೆ ಃ 04

ವೇತನ ಶ್ರೇಣಿಃ- 11600-200-12000-250-13000-300-14200-350-15600-400-17200-450-19000-500-21000 ಹಾಗೂ ಇತರ ಭತ್ಯೆಗಳೊಂದಿಗೆ.

**ಹುದ್ದೆಗಳ ವರ್ಗೀಕರಣಃ-**

| ಮೀಸಲಾತಿ | ಮಹಿಳೆ | ಗ್ರಾಮೀಣ | ಇತರೇ | ಒಟ್ಟು |
|---|---|---|---|---|
| ಸಾಮಾನ್ಯ | 1 | - | 1 | 2 |
| ಪ್ರವರ್ಗ-2ಎ | - | 1 | - | 1 |
| ಪರಿಶಿಷ್ಟ ಪಂಗಡ | 1 | - | - | 1 |
| ಒಟ್ಟು | 2 | 1 | 1 | 4 |

ಶೈಕ್ಷಣಿಕ ವಿದ್ಯಾರ್ಹತೆಃ-

(1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

(2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಹಿರಿಯ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಆಯ್ಕೆ ವಿಧಾನಃ-

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ 1ಃ5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## 3. ಜವಾನ ( PEON):

ಹುದ್ದೆಗಳ ಸಂಖ್ಯೆ ಃ 8

ವೇತನ ಶ್ರೇಣಿಃ- 9600-200-12000-250-13000-300-14200-350-14550

ಹುದ್ದೆಗಳ ವರ್ಗೀಕರಣಃ-

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಅಂ. ಅ | ಕ. ಮಾ. | ಒಟ್ಟು |
|---|---|---|---|---|---|---|
| ಸಾಮಾನ್ಯ | 1 | 1 | 1 | 1 (Hearing Impaired) | - | 4 |
| ಪ್ರವರ್ಗ 3ಬಿ | - | - | - | 1 (Low Vision) | - | 1 |
| ಪ್ರವರ್ಗ 2ಎ | - | - | 1 | - | - | 1 |
| ಪ್ರವರ್ಗ-2ಬಿ | - | - | - | 1 (Low Vision) | - | 1 |
| ಪರಿಶಿಷ್ಟ ಜಾತಿ | - | - | - | - | 1 | 1 |
| ಒಟ್ಟು | 1 | 1 | 2 | 3 | 1 | 8 |

ಶೈಕ್ಷಣಿಕ ವಿದ್ಯಾರ್ಹತೆಃ-

(1) ಏಳನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

(2) ಕನ್ನಡ ಓದಲು ಬರೆಯಲು ತಿಳಿದಿರಬೇಕು.

ಆಯ್ಕೆ ವಿಧಾನಃ-

ಮೇಲೆ ಹೇಳಿದ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ 1:10 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. 7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (**Grade**), ಅದನ್ನು ಅಂಕಗಳಾಗಿ ಪರಿವರ್ತಿಸಿ, ಗರಿಷ್ಟ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರಬೇಕು ಮತ್ತು ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಿದ್ದರೆ, ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೋಢಿಕರಿಸಿದ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಸೂಚನೆಃ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇತರೇ ಹುದ್ದೆಗಳನ್ನು ಆಯಾ ವರ್ಗಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ವರ್ಗಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಇತರ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಭಾಗ-2ಃ-

ವಯೋಮಿತಿ

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

(1) ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸತಕ್ಕದು.

(2) ಗರಿಷ್ಟ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ, ಪ.ಪಂಗಡ, ಪ್ರವರ್ಗ - 1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಟ ವಯಸ್ಸನ್ನು ಮೀರಿರಕೂಡದು.

## ವಯೋಮಿತಿ ಸಡಿಲಿಕೆಃ

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

(1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಿಲಾಗುವುದು.

(2) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

(3) ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

(4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

## ಪರಿವೀಕ್ಷಣಾ ಅವಧಿಃ

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 02 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಕನ್ನಡ ಭಾಷಾ ಪರೀಕ್ಷೆಯಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು

## ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗಾಗಿಃ

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

## ಭಾಗ-3ಃ-

## ಅರ್ಜಿ ಸಲ್ಲಿಸುವ ವಿಧಾನಃ

1. ಅಭ್ಯರ್ಥಿಯು ಈ ಅಧಿಸೂಚನೆಯಲ್ಲಿ ಲಗ್ತೀಕರಿಸಿದ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚುಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತನ್ನ ಕೈಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು ಹಾಗೂ ಅರ್ಜಿ ನಮೂನೆಯಲ್ಲಿ ಹುದ್ದೆ, ವರ್ಗ ಹಾಗೂ ಮೀಸಲಾತಿಯನ್ನು ಸಷ್ಟವಾಗಿ ನಮೂದಿಸತಕ್ಕದ್ದು. ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.

3. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು. ಒಂದೇ ಹುದ್ದೆಗೆ ವಿವಿಧ ಮೀಸಲಾತಿಯಡಿಗಳಲ್ಲಿ ಅರ್ಜಿಸಲ್ಲಿಸುವವರು ಪ್ರತ್ಯೇಕವಾಗಿ ಅರ್ಜಿಗಳನ್ನು ಹಾಗೂ ಆ ಅರ್ಜಿಗಳಲ್ಲಿ ಕಡ್ಡಾಯವಾಗಿ ಯಾವ ವರ್ಗ / ಮೀಸಲಾತಿಯಡಿಯಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿರುವಿರಿ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

4. ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರ ಪ್ರಮಾಣ ಪತ್ರಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸತಕ್ಕದ್ದು. ಅರ್ಜಿಯೊಂದಿಗೆ ಮೂಲ ಪ್ರತಿಗಳನ್ನು ಲಗ್ತೀಕರಿಸುವ ಅವಶ್ಯಕತೆ ಇರುವುದಿಲ್ಲ. ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆದಿರಬೇಕು.

## ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳುಃ

1. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ/ ವರ್ಗಾವಣೆ ಪತ್ರ / ಇನ್ನ್ಯಾವುದೇ ಅಧಿಕೃತ ದಾಖಲಾತಿಗಳು.

2. ವಿದ್ಯಾರ್ಹತೆಯ ಬಗೆಗಿನ ಅಂಕಪಟ್ಟಿಗಳ ನಕಲು ಪ್ರತಿಗಳು

3. ಪ.ಜಾತಿ/ಪ.ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಸಲ್ಲಿಸಬೇಕು.

4. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಃಸಿಆಸುಇ /96/ ಸೇನನಿ/2005 ದಿನಾಂಕಃ 10-08-2005ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು.

5. ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

...7

6. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.

7. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.

8. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿನಾಂಕಃ 19-11-2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.

9. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

10. ಸ್ವಯಂ ವಿಳಾಸವಿರುವ ರೂ.5/- ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.

11. ಅಭ್ಯರ್ಥಿಗಳು ಅರ್ಜಿಯೊಂದಿಗೆ <u>ಕೊನೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಯ ಮುಖ್ಯೋಪಾಧ್ಯಾಯರು / ಪ್ರಾಂಶುಪಾಲರಿಂದ ಪಡೆದ ನಡತೆ ಪ್ರಮಾಣ</u> ಪತ್ರದ ಸ್ವಯಂ ದೃಢೀಕೃತ ಪ್ರತಿಯನ್ನು ಲಗ್ತೀಕರಿಸತಕ್ಕದ್ದು.

12. ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ನಡತೆಯ ಬಗ್ಗೆ ತಮ್ಮ ಸಂಬಂಧಿಯಲ್ಲದ ಸಮಾಜದ ಇಬ್ಬರು ಗಣ್ಯ ವ್ಯಕ್ತಿಗಳಿಂದ (ಹಿಂದೆ ಕಲಿತ ಶಾಲಾ ಅಥವಾ ಕಾಲೇಜು ಮುಖ್ಯಸ್ಥರನ್ನು ಹೊರತು ಪಡಿಸಿ) ಅರ್ಜಿ ಸಲ್ಲಿಸುವ ದಿನಾಂಕದ <u>ಆರು ತಿಂಗಳ ಒಳಗೆ ಪಡೆದ ಎರಡು ಪ್ರಮಾಣ ಪತ್ರಗಳನ್ನು ಲಗತ್ತಿಕರಿಸತಕ್ಕದ್ದು.</u> (ಗಣ್ಯ ವ್ಯಕ್ತಿಗಳ ರುಜುವಿನಡಿಯಲ್ಲಿ ಹೆಸರು ಮತ್ತು ಮೊಹರು ಕಡ್ಡಾಯವಾಗಿ ಇರತಕ್ಕದ್ದು )

<u>ಅಭ್ಯರ್ಥಿಗಳಿಗೆ ಸೂಚನೆಃ-</u>

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

2. ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ, ಮೀಸಲಾತಿ, ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಹಾಗೂ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಮೀಸಲಾತಿಯನ್ನು ಕೋರಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಆಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಸಮುಚಿತ ಮಾರ್ಗದ ಮುಖಾಂತರವೇ ಸಲ್ಲಿಸಬೇಕು.

4. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

5. ಆಭ್ಯರ್ಥಿಗಳು ತಮ್ಮ ಅರ್ಜಿಯ ಜೊತೆ 5-00 ರೂ.ಗಳ ಸ್ಟಾಂಪು ಲಗತ್ತಿಸಿರುವ ಸ್ವವಿಳಾಸವಿರುವ ಲಕೋಟೆಯನ್ನು ಲಗತ್ತಿಸಿರಬೇಕು.

6. ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮೇಲೆ ನಮೂದಿಸಿರಬೇಕು.

7. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಹಾಜರಾಗತಕ್ಕದ್ದು.

8. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವುದಿಲ್ಲ.

**Sd/-**
(ವೆಂಕಟೇಶ ನಾಯ್ಕ ಟಿ.)
ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ.

ಪ್ರತಿಯನ್ನು ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

<u>ಪ್ರತಿಯನ್ನುಃ-</u>

(1) ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ.
(2) ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು, ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
(3) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು- ಇವರಿಗೆ
(4) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ - ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ
(5) ಉಡುಪಿ ಜಿಲ್ಲೆಯ ಎಲ್ಲಾ ಅಧೀನ ನ್ಯಾಯಾಲಯಗಳಿಗೆ, ವ್ಯಾಪಕ ಪ್ರಚಾರಕ್ಕಾಗಿ
(6) ಉಡುಪಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸೂಚನಾ ಫಲಕಕ್ಕೆ
(7) ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.

# <u>ಅರ್ಜಿ ನಮೂನೆ</u>

ಅಭ್ಯರ್ಥಿಯ
ಇತ್ತೀಚಿನ
ಪಾಸ್‌ಪೋರ್ಟ್
ಅಳತೆಯ
ಭಾವಚಿತ್ರದ ಮೇಲೆ
ಸಹಿ ಮಾಡಿ
ಅಂಟಿಸುವುದು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ ಜಿಲ್ಲೆ, <u>ಉಡುಪಿ</u> - ಇವರಿಗೆ.

ಮಾನ್ಯರೇ,

ಉಡುಪಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆಎಡಿಎಂಎನ್/2/2017, ದಿನಾಂಕ: 09-03-2017ರ ಪ್ರಕಾರ ............................ ಹುದ್ದೆಗೆ ನಾನು ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ.

| | | | | |
|---|---|---|---|---|
| 1 | ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ) | | | |
| 2 | ತಂದೆಯ / ತಾಯಿಯ / ಗಂಡನ ಹೆಸರು | | | |
| 3 | ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ | | | |
| 4 | ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ | | | |
| 5 | ಜನ್ಮ ದಿನಾಂಕ | | | |
| 6 | ವಯಸ್ಸು | ವರ್ಷಗಳು | ತಿಂಗಳುಗಳು | ದಿನಗಳು |
| | | | | |
| 7 | ಲಿಂಗ | ಪುರುಷ | ಮಹಿಳೆ | |
| | | | | |
| 8 | ರಾಷ್ಟ್ರೀಯತೆಃ | | | |
| 9 | ಧರ್ಮ ಮತ್ತು ಜಾತಿ | | | |
| 10 | ವೈವಾಹಿಕ ಸ್ಥಿತಿ | ವಿವಾಹಿತ | ಅವಿವಾಹಿತ | |
| | | | | |
| 11 | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | | | |
| 12 | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ? | ಹೌದು | ಇಲ್ಲ | |
| | | | | |
| 13 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ? | ಹೌದು | ಇಲ್ಲ | |
| | | | | |

| | | | | | |
|---|---|---|---|---|---|
| 14 | **ಕೋರುವ ಮೀಸಲಾತಿ**<br>(ಕೋರುವ ಮೀಸಲಾತಿಯನ್ನು √ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು) | ಸಾಮಾನ್ಯ | 2-ಎ | 2-ಬಿ | 3-ಬಿ |
| | | | | | |
| | | ಪ.ಜಾ | ಪ.ಪಂ | | ಪ್ರವರ್ಗ-1 |
| | | | | | |

| | | | | | | |
|---|---|---|---|---|---|---|
| 15 | ನೀವು ಈ ಯಾವುದಾದರೂ ಮೀಸಲಾತಿಯಡಿಯಲ್ಲಿ ಅಡಿಯಲ್ಲಿ ಬರುತ್ತೀರ?<br>(ಸೇರುವ ಮೀಸಲಾತಿಯನ್ನು √ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು) | ಮಹಿಳೆ | ಗ್ರಾಮೀಣ | ಕ.ಮಾ | ಅಂ.ಅ | ಇತರೆ |
| | | | | | | |

16 ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳುಃ- (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)
ಸೂಃ ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು

| ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೋಂದಣಿ ಸಂಖ್ಯೆ. | ಗರಿಷ್ಠ ಅಂಕಗಳು | ಪಡೆದಿರುವ ಅಂಕಗಳು | ಶೇಕಡವಾರು ಅಂಕಗಳು |
|---|---|---|---|---|
| 7ನೇ ತರಗತಿ | | | | |
| ಎಸ್‌ಎಸ್‌ಎಲ್‌ಸಿ/ತತ್ಸಮಾನ ಪರೀಕ್ಷೆ | | | | |
| ಕನ್ನಡ ಬೆರಳಚ್ಚು (ಹಿರಿಯ ಶ್ರೇಣಿ) | | | | |
| ಆಂಗ್ಲ ಬೆರಳಚ್ಚು (ಹಿರಿಯ ಶ್ರೇಣಿ) | | | | |
| ಕನ್ನಡ ಶೀಘ್ರಲಿಪಿ (ಹಿರಿಯ ಶ್ರೇಣಿ) | | | | |
| ಆಂಗ್ಲ ಶೀಘ್ರಲಿಪಿ (ಹಿರಿಯ ಶ್ರೇಣಿ) | | | | |

| | | |
|---|---|---|
| 17 | ಕಂಪ್ಯೂಟರ್ ತರಬೇತಿಯನ್ನು ಪಡೆದಿದ್ದಲ್ಲಿ ಪ್ರಮಾಣ ಪತ್ರಗಳ ಪ್ರತಿಗಳೊಂದಿಗೆ ವಿವರಗಳು | |
| 18 | ಇತರೆ ವಿದ್ಯಾರ್ಹತೆಗಳು ಇದ್ದಲ್ಲಿ | |
| 19 | ನಿಮ್ಮ ಸ್ವವಿಳಾಸವಿರುವ ರೂ.5/-ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ? | |

## ಘೋಷಣೆ

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಕೊಡಲು ನಾನು ಬದ್ಧನಾಗಿರುತ್ತೇನೆ/ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಉಡುಪಿ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ/ಸಿದ್ಧಳಿದ್ದೇನೆ.

ಸ್ಥಳ :
ದಿನಾಂಕ: ಅಭ್ಯರ್ಥಿಯ ಸಹಿ.